**Regional Bulletin Kannada**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**<u>ಮುಖ್ಯಾಂಶಗಳು</u>**

**22.03.2024** **18.40 hrs**

- **೨೦೨೪ರ ಲೋಕಸಭಾ ಚುನಾವಣೆಯ ಮೇಲುಸ್ತುವಾರಿಗೆ ಚುನಾವಣಾ ಆಯೋಗದಿಂದ ೨ ಸಾವಿರದ ೧೦೦ ಚುನಾವಣಾ ವೀಕ್ಷಕರ ನೇಮಕ**
- **ಜಿಲ್ಲಾಮಟ್ಟದಲ್ಲಿ ಲೋಕಸಭಾ ಚುನಾವಣೆ ಪ್ರಕ್ರಿಯೆಗಳು ಪ್ರಗತಿಯಲ್ಲಿ**
- **೫, ೮, ೯ ನೇ ತರಗತಿಗಳಿಗೆ ಬೋರ್ಡ್ ಪರೀಕ್ಷೆ ನಡೆಸಬಹುದು ಎಂದು ರಾಜ್ಯ ಸರ್ಕಾರಕ್ಕೆ ಹೈಕೋರ್ಟ್ ಸೂಚನೆ.**
- **ಕೊಡಗಿನ ನಾಪೋಕ್ಲುವಿನಲ್ಲಿ ಈ ತಿಂಗಳ ೩೦ ರಿಂದ ಏಪ್ರಿಲ್ ೨೮ರವರೆಗೆ ಪ್ರತಿಷ್ಠಿತ ಕೊಡವ ಹಾಕಿ ಉತ್ಸವ**

**<><*<><>*><>**

೨೦೨೪ರ ಸಾರ್ವತ್ರಿಕ ಚುನಾವಣೆಗೆ ಭಾರತ ಚುನಾವಣಾ ಆಯೋಗ ಸಜ್ಜಾಗಿದೆ. ೧೮ನೇ ಲೋಕಸಭೆಗೆ ಸದಸ್ಯರನ್ನು ಆಯ್ಕೆ ಮಾಡಲು ನಡೆಯಲಿರುವ ಈ ಚುನಾವಣೆಯನ್ನು ಮುಕ್ತ ಮತ್ತು ನ್ಯಾಯಸಮ್ಮತವಾಗಿ ನಡೆಸುವ ಸಲುವಾಗಿ ಆಯೋಗ, ೨ ಸಾವಿರದ ೧೦೦ ಚುನಾವಣಾ ವೀಕ್ಷಕರ ಸಶಕ್ತ ತಂಡವೊಂದನ್ನು ನಿಯೋಜಿಸಿದೆ. ಈ ಚುನಾವಣಾ ವೀಕ್ಷಕರು, ಹಲವು ಗುರುತರ ಜವಾಬ್ದಾರಿಗಳೊಂದಿಗೆ ಜಿಲ್ಲಾ, ಚುನಾವಣಾಧಿಕಾರಿಗಳು ಮತ್ತು ಮತಗಟ್ಟೆ ಅಧಿಕಾರಿಗಳ ಕಾರ್ಯ ನಿರ್ವಹಣೆಯ ಮೇಲೂ ಸಹ ನಿಕಟ ನಿಗಾ ಇಡಲಿದ್ದಾರೆ. ಚುನಾವಣಾ ಪ್ರಕ್ರಿಯೆ ಅವಧಿಯಲ್ಲಿ ಯಾವುದೇ ರೀತಿಯ ಪ್ರಚೋದನೆ, ಬೆದರಿಕೆ ಅಥವಾ ಒತ್ತಾಯದ ಪ್ರಕರಣಗಳನ್ನೂ ಈ ವೀಕ್ಷಕರು ಗಮನಿಸಲಿದ್ದಾರೆ. ಇದಲ್ಲದೇ, ಶಾಂತಿಯುತ ಮತದಾನಕ್ಕೆ ಅಗತ್ಯವಾದ ಭದ್ರತಾ ಪಡೆಗಳ ನಿಯೋಜನೆ ಹಾಗೂ ಅವುಗಳ ಸಾಗಾಟವೂ ಕೂಡ ಈ ವೀಕ್ಷಕರ ಮೇಲುಸ್ತುವಾರಿಯಲ್ಲಿ ನಡೆಯುವುದು. ಚುನಾವಣಾ ಕರ್ತವ್ಯಗಳಿಗೆ ನಿಯೋಜಿತಗಾರುವ ಸಿಬ್ಬಂದಿ ಮತ್ತು ಮತಯಂತ್ರಗಳ ರ್‍ಯಾಂಡಮೈಸೇಷನ್ ಪ್ರಕ್ರಿಯೆಯನ್ನೂ ಸಹ ಚುನಾವಣಾ ವೀಕ್ಷಕರು ಗಮನಿಸುತ್ತಾರೆ. ಈ ಎಲ್ಲಾ ಜವಾಬ್ದಾರಿಗಳ ನಿರ್ವಹಣೆಗಾಗಿ ವೀಕ್ಷಕರು ತಮ್ಮ ನಿಯೋಜಿತ ಸಂಸದೀಯ ಮತಕ್ಷೇತ್ರಗಳಲ್ಲಿ ಮೊಕ್ಕಾಂ ಹೂಡುತ್ತಾರೆ ಮತ್ತು ಅವರ ಎಲ್ಲ ಸಂಪರ್ಕ ವಿವರಗಳು, ವೆಬ್‌ಸೈಟ್‌ಗಳು ಹಾಗೂ ಮಾಧ್ಯಮ ಘಟಕಗಳೂ ಸೇರಿದಂತೆ ಹಲವು ವೇದಿಕೆಗಳಲ್ಲಿ ಲಭ್ಯವಿರುತ್ತವೆ. ತಮ್ಮ ವ್ಯಾಪ್ತಿಯ ಮತಕೇಂದ್ರಗಳಿಗೆ ಈ ವೀಕ್ಷಕರು ನಿಯಮಿತವಾಗಿ ಭೇಟಿ ನೀಡಲೂ ಸಹ ಆಯೋಗ ಅವರಿಗೆ ನಿರ್ದೇಶಿಸಿದೆ. ಇದರಿಂದ ಚುನಾವಣೆಯ ಅವಧಿಯಲ್ಲಿ

ಮತಕೇಂದ್ರಗಳ ಮಟ್ಟದಲ್ಲಿ ನಡೆಯುವ ಯಾವುದೇ ವಿವಾದಗಳು ಅಥವಾ ಸವಾಲುಗಳ ನಿರ್ವಹಣೆಗೆ ನೆರವಾಗಲಿದೆ. ಚುನಾವಣಾ ಪ್ರಕ್ರಿಯೆಯನ್ನು ಸುಗಮಗೊಳಿಸುವ ಪ್ರಯತ್ನವಾಗಿ ಈ ಚುನಾವಣಾ ವೀಕ್ಷಕರು ತಮ್ಮ ನಿಯೋಜಿತ ಮತಕ್ಷೇತ್ರಗಳಲ್ಲಿ ಎದುರಾಗಬಹುದಾದ ಯಾವುದೇ ವಿವಾದಗಳ ಇತ್ಯರ್ಥಕ್ಕಾಗಿ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಮತ್ತು ಅಭ್ಯರ್ಥಿಗಳೊಂದಿಗೆ ಆಗಾಗ ಸಭೆಗಳನ್ನು ನಡೆಸುತ್ತಾರೆ.

**<><*<><>*><>**

ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಜನಾಭಿಪ್ರಾಯವೇ ಅಂತಿಮವಾದದ್ದು, ಕಾಂಗ್ರೆಸ್ ಪಕ್ಷ ಜನರಿಂದ ನಿಧಿ ಸಂಗ್ರಹಿಸಿದೆ. ಜನರು ಸ್ವಯಂಪ್ರೇರಿತವಾಗಿ ಕೊಟ್ಟ ಹಣ ಪಕ್ಷದ ಬ್ಯಾಂಕ್ ಖಾತೆಯಲ್ಲಿತ್ತು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಬೆಂಗಳೂರಿನಲ್ಲಿಂದು ಮಾತನಾಡಿದ ಅವರು, ಸಣ್ಣ ತಾಂತ್ರಿಕ ಕಾರಣ ನೀಡಿ ಪಕ್ಷದ ಬ್ಯಾಂಕ್ ಖಾತೆಯನ್ನು ಸ್ಥಗಿತಗೊಳಿಸಿರುವುದು ಸರ್ವಾಧಿಕಾರಿ ಧೋರಣೆಯಾಗಿದೆ ಎಂದು ಆಪಾದಿಸಿದರು. ಎದುರಾಳಿ ಪಕ್ಷವೊಂದು ಚುನಾವಣೆಯಲ್ಲಿ ಪಾಲ್ಗೊಳ್ಳದಂತೆ ತೊಂದರೆ ನೀಡುವುದು ಪ್ರಜಾಪ್ರಭುತ್ವಕ್ಕೆ ಮಾರಕವಾದ ಬೆಳವಣಿಗೆ ಎಂದರು.

**<><*<><>*><>**

ರಾಜ್ಯದ ಕಾಂಗ್ರೆಸ್ ಸರ್ಕಾರ, ಗ್ಯಾರಂಟಿ ಭರವಸೆಗಳ ಮೇಲೆ ಅಧಿಕಾರಕ್ಕೆ ಬಂದಿದೆ. ಹಾಗಾಗಿ ಆ ಭರವಸೆಗಳ ಈಡೇರಿಕೆಯನ್ನೇ ಪ್ರಮುಖ ಉದ್ದೇಶ ಮಾಡಿಕೊಂಡು ಇತರ ಜವಾಬ್ದಾರಿಗಳನ್ನು ಕಡೆಗಣಿಸುತ್ತಿದೆ ಎಂದು ವಿಧಾನಪರಿಷತ್ ಸದಸ್ಯೆ ಭಾರತಿ ಶೆಟ್ಟಿ ಟೀಕಿಸಿದ್ದಾರೆ. ಬೆಂಗಳೂರಿನ ಬಿಜೆಪಿ ರಾಜ್ಯ ಕಾರ್ಯಾಲಯದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದೆಲ್ಲೆಡೆ ನೀರಿನ ಸಮಸ್ಯೆ ವಿಪರೀತವಾಗಿದೆ. ಬೆಂಗಳೂರು ನಗರದಲ್ಲಿ ಟ್ಯಾಂಕರ್‌ಗಳ ದೊಡ್ಡ ಮಾಫಿಯ ಸಮಸ್ಯೆ ಎದುರಾಗಿದೆ. ಸರ್ಕಾರ ನಿಗದಿಪಡಿಸಿರುವ ದರಕ್ಕೆ ಟ್ಯಾಂಕರ್ ನೀರು ಪೂರೈಕೆಯಾಗುತ್ತಿಲ್ಲ. ಟ್ಯಾಂಕರ್ ಮಾಲೀಕರು ಸರ್ಕಾರದ ಮಾತು ಕೇಳುತ್ತಿಲ್ಲ ಎಂದು ಆಕ್ಷೇಪಿಸಿದರು. ಲೋಕಸಭಾ ಚುನಾವಣೆ ಪ್ರಚಾರಕ್ಕೆ ಅಂಗನವಾಡಿ, ಆಶಾ ಕಾರ್ಯಕರ್ತೆಯರನ್ನು ಬಳಿಸಿಕೊಳ್ಳಲು ರಾಜ್ಯ ಸರ್ಕಾರ ಹುನ್ನಾರ ನಡೆಸುತ್ತಿದೆ. ಕೇಂದ್ರ ಸರ್ಕಾರದ ಸೌರಶಕ್ತಿ ಯೋಜನೆಗೆ ಒಂದು ಪೈಸೆ ನೀಡದೆ, ಯೋಜನೆಯನ್ನು ರಾಜ್ಯ ಸರ್ಕಾರ ಮಾಡಿರುವುದಾಗಿ ಕರಪತ್ರ ಹಂಚುತ್ತಿದೆ ಎಂದು ಭಾರತಿ ಶೆಟ್ಟಿ ದೂರಿದರು.

**<><*<><>*><>**

ರಾಜ್ಯದಲ್ಲಿ ೫, ೮, ೯ ಮತ್ತು ೧೧ನೇ ತರಗತಿ ವಿದ್ಯಾರ್ಥಿಗಳಿಗೆ ಬೋರ್ಡ್ ಪರೀಕ್ಷೆ ನಡೆಸುವ ಕುರಿತಂತೆ ಇಂದು ಕರ್ನಾಟಕ ಉಚ್ಚನ್ಯಾಯಾಲಯದ ವಿಭಾಗೀಯ ಪೀಠ ತೀರ್ಪು ಪ್ರಕಟಿಸಿದೆ. ಈ ತರಗತಿಗಳಿಗೆ ಬೋರ್ಡ್ ಪರೀಕ್ಷೆ ನಡೆಸಬಹುದು ಎಂದು ಸರ್ಕಾರಕ್ಕೆ ಸೂಚಿಸಿದೆ. ಸ್ಥಗಿತಗೊಂಡಿದ್ದ

ಪರೀಕ್ಷೆ ಮುಂದುವರೆಸಲು ಹೈಕೋರ್ಟ್ ಆದೇಶ ಹೊರಡಿಸಿದೆ. ನ್ಯಾಯಮೂರ್ತಿ ಕೆ. ಸೋಮಶೇಖರ್, ನ್ಯಾಯಮೂರ್ತಿ ಕೆ. ರಾಜೇಶ್ ರೈ ಅವರು ಇರುವ ಹೈಕೋರ್ಟ್ ವಿಭಾಗೀಯ ಪೀಠ ತೀರ್ಪು ಪ್ರಕಟಿಸಿತು. ಇದಕ್ಕೂ ಮುನ್ನ ಈ ತರಗತಿಗಳಿಗೆ ಬೋರ್ಡ್ ಪರೀಕ್ಷೆ ನಡೆಸುವ ಕುರಿತಂತೆ ರಾಜ್ಯ ಸರ್ಕಾರ ಹೊರಡಿಸಿದ್ದ ಸುತ್ತೋಲೆಯನ್ನು ಹೈಕೋರ್ಟ್‌ನ ಏಕಸದಸ್ಯ ಪೀಠ ರದ್ದುಪಡಿಸಿತ್ತು. ಆ ಆದೇಶಕ್ಕೆ ವಿಭಾಗೀಯ ಪೀಠ ತಡೆ ನೀಡಿತ್ತು. ನಂತರ ವಿಭಾಗೀಯ ಪೀಠದ ಆದೇಶಕ್ಕೆ ಸುಪ್ರೀಂಕೋರ್ಟ್‌ನಿಂದ ತಡೆಯಾಜ್ಞೆ ನೀಡಲಾಗಿತ್ತು. ನ್ಯಾಯಾಲಯದ ಇಂದಿನ ಆದೇಶದೊಂದಿಗೆ ರಾಜ್ಯ ಪಠ್ಯಕ್ರಮದ ೫, ೮,೯ನೇ ತರಗತಿಗಳ ಬೋರ್ಡ್ ಪರೀಕ್ಷೆಗಳ ವಿಚಾರ ಕುರಿತ ಅನಿಶ್ಚಿತತೆ ಬಗೆಹರಿದಂತಾಗಿದೆ. ಈಗಾಗಲೇ ಐದನೇ ತರಗತಿಯ ನಾಲ್ಕು ವಿಷಯಗಳ ಪರೀಕ್ಷೆ ಮುಗಿದಿವೆ. ೮ ಹಾಗೂ ೯ನೇ ತರಗತಿಗಳ ಎರಡೆರಡು ವಿಷಯಗಳ ಪರೀಕ್ಷೆ ನಡೆದಿವೆ. ಏಕ ಸದಸ್ಯ ಪೀಠ, ಬೋರ್ಡ್ ಪರೀಕ್ಷೆಗಳನ್ನು ರದ್ದುಗೊಳಿಸುವ ಮೊದಲೇ ೧೧ ನೇ ತರಗತಿಯ ಪರೀಕ್ಷೆಗಳನ್ನು ಮುಕ್ತಾಯಗೊಳಿಸಲಾಗಿತ್ತು. ಹೀಗಾಗಿ, ಆ ತರಗತಿಯ ಉತ್ತರ ಪತ್ರಿಕೆಗಳ ಮೌಲ್ಯಮಾಪನ ಪೂರ್ಣಗೊಳಿಸುವಂತೆಯೂ ವಿಭಾಗೀಯ ಪೀಠ ಸೂಚಿಸಿದೆ.

**<><*<><>*><>**

ಇದೇ ತಿಂಗಳ ೩೧ರ ಭಾನುವಾರದಂದು ಎಲ್ಲ ಬ್ಯಾಂಕ್‌ಗಳ ಶಾಖೆಗಳು ಕಾರ್ಯನಿರ್ವಹಿಸುವಂತೆ ಭಾರತೀಯ ರಿಸರ್ವ್ ಬ್ಯಾಂಕ್ ಸೂಚಿಸಿದೆ. ಪ್ರಸಕ್ತ ಹಣಕಾಸು ವರ್ಷದ ಕೊನೆಯ ದಿನ ಸರ್ಕಾರದ ಸ್ವೀಕೃತಿ ಮತ್ತು ಪಾವತಿಗಳಿಗೆ ಅನುಕೂಲವಾಗುವಂತೆ ವಹಿವಾಟುಗಳನ್ನು ನಡೆಸಲು ಬ್ಯಾಂಕ್‌ಗಳು ಕರ್ತವ್ಯ ನಿರ್ವಹಿಸಬೇಕೆಂಬ ಸರ್ಕಾರದ ಮನವಿ ಮೇರೆಗೆ ಆರ್‌ಬಿಐ ಈ ಸೂಚನೆಯನ್ನು ನೀಡಿದೆ. ಭಾನುವಾರದಂದು ಸಹ ಬ್ಯಾಂಕ್ ಸೇವೆಗಳು ಲಭ್ಯವಿರುವ ಬಗ್ಗೆ ಜನರಿಗೆ ಮಾಹಿತಿ ನೀಡಲು ವ್ಯಾಪಕ ಪ್ರಚಾರ ಕಾರ್ಯ ಕೈಗೊಳ್ಳುವಂತೆ ಆರ್‌ಬಿಐ ಎಲ್ಲ ಬ್ಯಾಂಕ್‌ಗಳಿಗೆ ನಿರ್ದೇಶನ ನೀಡಿದೆ.

**<><*<><>*><>**

ಲೋಕಸಭೆ ಚುನಾವಣೆಗಾಗಿ ಹಲವು ಜಿಲ್ಲೆಗಳಲ್ಲಿ ನಡೆದಿರುವ ಸಿದ್ಧತೆಗಳ ಬಗ್ಗೆ ಮಾಹಿತಿ ಧಾರವಾಡ ಜಿಲ್ಲೆಯಲ್ಲಿ ಚುನಾವಣಾ ಆಯೋಗದ ಸಿ-ವಿಜಿಲ್ ಮೊಬೈಲ್ ಆಪ್ ಮೂಲಕ ಮಾದರಿ ನೀತಿ ಸಂಹಿತೆ ಉಲ್ಲಂಘನೆಯ ೪೭೪ ದೂರುಗಳು ದಾಖಲಾಗಿವೆ. ಇಂತಹ ದೂರುಗಳನ್ನು ತ್ವರಿತವಾಗಿ ನಿರ್ವಹಿಸಲು ಜಿಲ್ಲಾಧಿಕಾರಿ ಕಚೇರಿಯಲ್ಲಿ ಸಿ-ವಿಜಿಲ್ ನಿಯಂತ್ರಣ ಕೊಠಡಿಯನ್ನು ಸ್ಥಾಪಿಸಲಾಗಿದೆ. ಸಾರ್ವಜನಿಕರು ಈ ಮೊಬೈಲ್ ಆಪ್ ಡೌನ್‌ಲೋಡ್ ಮಾಡಿಕೊಂಡು ಸುಲಭವಾಗಿ ಚುನಾವಣಾ ಅಕ್ರಮಗಳನ್ನು ಜಿಲ್ಲಾಡಳಿತ ಗಮನಕ್ಕೆ ತರಬೇಕು ಎಂದು ಮಾದರಿ ನೀತಿ ಸಂಹಿತೆಯ ಜಿಲ್ಲಾ ನೋಡೆಲ್ ಅಧಿಕಾರಿ ಮೋನಾ ರೋಟ್ ತಿಳಿಸಿದ್ದಾರೆ. ಕೋಲಾರ

ಲೋಕಸಭಾ ಕ್ಷೇತ್ರದ ವ್ಯಾಪ್ತಿಯ ಚಿಕ್ಕಬಳ್ಳಾಪುರ ಜಿಲ್ಲೆ ಚಿಂತಾಮಣಿ ನಗರದಲ್ಲಿ ಇಂದು ಆರೋಗ್ಯ ಇಲಾಖೆ ನೇತೃತ್ವದಲ್ಲಿ ಆಶಾ ಮತ್ತು ಆರೋಗ್ಯ ಕಾರ್ಯಕರ್ತರು ಮಾನವ ಸರಪಳಿ ನಿರ್ಮಿಸುವ ಮೂಲಕ ಮತದಾನದ ಬಗ್ಗೆ ಜಾಗೃತಿ ಮೂಡಿಸಿದರು. ಏಪ್ರಿಲ್ ೨೬ ರಂದು ನಡೆಯಲಿರುವ ಚುನಾವಣೆಯಲ್ಲಿ ಪ್ರತಿಯೊಬ್ಬರೂ ತಪ್ಪದೇ ಮತದಾನ ಮಾಡಿ, ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಬಲಪಡಿಸಬೇಕು ಎಂದು ಮನವಿ ಮಾಡಲಾಯಿತು. ಯಾದಗಿರಿ ಜಿಲ್ಲೆಯಲ್ಲಿ ಲೋಕಸಭಾ ಚುನಾವಣೆಗಾಗಿ ನಿಯೋಜಿಸಿರುವ ಎಲ್ಲ ನೋಡೆಲ್ ಅಧಿಕಾರಿಗಳು ಯಾವುದೇ ಲೋಪ ಆಗದಂತೆ ಜವಾಬ್ದಾರಿಯಿಂದ ಕಾರ್ಯ ನಿರ್ವಹಿಸಬೇಕು. ವಿವಿ ಪ್ಯಾಟ್, ಇವಿಎಂ ಯಂತ್ರಗಳ ನಿರ್ವಹಣೆ ಹಾಗೂ ಅಂಚೆ ಮತಪತ್ರಗಳ ನಿರ್ವಹಣೆ ಸೇರಿದಂತೆ ಎಲ್ಲ ಕರ್ತವ್ಯಗಳನ್ನು ಎಚ್ಚರದಿಂದ ನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಡಾ.ಬಿ.ಸುಶೀಲಾ ಸೂಚಿಸಿದ್ದಾರೆ. ಬೆಳಗಾವಿ ಜಿಲ್ಲೆಯಲ್ಲಿ ಚುನಾವಣಾ ಆಯೋಗದ ಮಾರ್ಗಸೂಚಿ ಅನ್ವಯ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿಗಳು ಹಾಗೂ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳ ಸಮ್ಮುಖದಲ್ಲಿ ಇವಿಎಂ ಮತಯಂತ್ರಗಳ ಮೊದಲ ಹಂತದ ರ‍್ಯಾಂಡಮೈಸೇಷನ್ ಪ್ರಕ್ರಿಯೆಯನ್ನು ಇಂದು ನಡೆಸಲಾಯಿತು. ವಿಧಾನಸಭಾ ಕ್ಷೇತ್ರವಾರು ಹಂಚಿಕೆಯಾಗಿರುವ ಮತಯಂತ್ರಗಳನ್ನು ಮುಂದಿನ ಹಂತದ ರ‍್ಯಾಂಡಮೈಸೇಷನ್ ಸಂದರ್ಭದಲ್ಲಿ ಮತಗಟ್ಟೆವಾರು ಹಂಚಿಕೆ ಮಾಡಲಾಗುವುದು. ಗದಗ ಜಿಲ್ಲೆಯಲ್ಲಿ ಚುನಾವಣೆಯ ದಿನ ಅಗತ್ಯ ಸೇವೆಗಳ ಪಾಳಿ ಕರ್ತವ್ಯ ನಿರ್ವಹಿಸಬೇಕಾಗುವ ಸಿಬ್ಬಂದಿ ಅಂಚೆ ಮತದಾನದ ಮೂಲಕ ತಮ್ಮ ಮತದಾನದ ಹಕ್ಕನ್ನು ಚಲಾಯಿಸಬೇಕು. ಅಂಚೆ ಮತದಾನಕ್ಕೆ ಅರ್ಜಿ ಸಲ್ಲಿಸಿದವರಿಗೆ ಮತಕೇಂದ್ರಕ್ಕೆ ಬಂದು ವೋಟ್ ಮಾಡಲು ಅವಕಾಶವಿರುವುದಿಲ್ಲ ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ತಿಳಿಸಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯಾದ್ಯಂತ ಚುನಾವಣಾ ಅಕ್ರಮಗಳು ನಡೆಯದಂತೆ ಕಟ್ಟು ನಿಟ್ಟಿನ ಕ್ರಮ ಕೈಗೊಳ್ಳಲಾಗುತ್ತಿದೆ. ಈವರೆಗೆ ೪೫ ಪ್ರಕರಣಗಳಲ್ಲಿ ಅಬಕಾರಿ ನಿಯಮಗಳನ್ನು ಉಲ್ಲಂಘಿಸಿ, ಅಕ್ರಮವಾಗಿ ದಾಸ್ತಾನು ಮಾಡಿದ್ದ ೭.೫ ಕೋಟಿ ರೂಪಾಯಿ ಮೌಲ್ಯದ ಮದ್ಯ ಹಾಗೂ ೬ ವಾಹನಗಳನ್ನು ವಶಪಡಿಸಿಕೊಳ್ಳಲಾಗಿದೆ. ೧೦ ಕೆ.ಜಿ ಗಾಂಜಾ ವಶಪಡಿಸಿಕೊಂಡು ಪ್ರಕರಣ ದಾಖಲಿಸಲಾಗಿದೆ. ಜಿಲ್ಲೆಯ ಎಲ್ಲ ೨೧ ಚೆಕ್‌ಪೋಸ್ಟ್‌ಗಳಲ್ಲಿ ಸಿ.ಸಿ ಟಿವಿ ಕ್ಯಾಮರಾ ಅಳವಡಿಸಲಾಗಿದ್ದು, ಪ್ರತಿ ಚಲನವಲನದ ಮೇಲೆ ನಿಗಾ ವಹಿಸಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ಡಾ.ಎನ್.ಶಿವಶಂಕರ ತಿಳಿಸಿದ್ದಾರೆ. ಚಿಕ್ಕಮಗಳೂರು ಜಿಲ್ಲೆಯಲ್ಲಿ ಚುನಾವಣೆ ಅಕ್ರಮಗಳ ಮೇಲೆ ನಿಕಟ ನಿಗ ಇಡಲಾಗಿದ್ದು, ಇಂದು ಕೊಪ್ಪ ತಾಲೂಕು ಕೊಗ್ರೆ ಗ್ರಾಮದಲ್ಲಿ ದಾಖಲೆಇಲ್ಲದೆ ಶೇಖರಿಸಲಾಗಿದ್ದ ಮದ್ಯವನ್ನು ವಶಪಡಿಸಿಕೊಳ್ಳಲಾಗಿದೆ. ಲೋಕಸಭಾ ಚುನಾವಣೆ ಕಣದಲ್ಲಿರುವ ಅಭ್ಯರ್ಥಿಗಳ ಬಗ್ಗೆ ಸಂಪೂರ್ಣ ಮಾಹಿತಿಯನ್ನು ಕೆವೈಸಿ ಆಪ್‌ನಿಂದ ಪಡೆಯಬಹುದು. ಈ ಆಪ್‌ಅನ್ನು ಡೌನ್‌ಲೋಡ್ ಮಾಡಿಕೊಂಡು ಅಭ್ಯರ್ಥಿಗಳ ಬಗ್ಗೆ ವಿವರಗಳನ್ನು ಅಧ್ಯಯನ ಮಾಡಿ

ಸೂಕ್ತ ಅಭ್ಯರ್ಥಿಗೆ ಮತದಾನ ಮಾಡಬೇಕು ಎಂದು ಚುನಾವಣಾ ಆಯೋಗ ಸಲಹೆ ನೀಡಿದೆ. ಕೋಲಾರ ತಾಲೂಕು ಸ್ವೀಪ್ ಸಮಿತಿ ವತಿಯಿಂದ “ಚುನಾವಣಾ ಪರ್ವ- ದೇಶದ ಗರ್ವ” ಅಭಿಯಾನಕ್ಕೆ ಇಂದು ಜಿಲ್ಲಾಧಿಕಾರಿ ಅಕ್ರಂ ಪಾಷ ಚಾಲನೆ ನೀಡಿದರು. ನಂತರ ಮಾತನಾಡಿದ ಅವರು, ಪ್ರತಿಯೊಬ್ಬ ಅರ್ಹ ಮತದಾರನು ಏಪ್ರಿಲ್-೧೮ ರಂದು ನಡೆಯುವ ಪ್ರಜಾಪ್ರಭುತ್ವದ ಹಬ್ಬದಲ್ಲಿ ಪಾಲ್ಗೊಂಡು ಸದೃಢ ಪ್ರಜಾಪ್ರಭುತ್ವದ ಗೆಲುವಿಗೆ ಕಾರಣರಾಗಬೇಕು.  ಕಳೆದ ಬಾರಿ ಯಾವ ಕ್ಷೇತ್ರದಲ್ಲಿ ಮತದಾನ ಕಡಿಮೆ ಆಗಿದೆಯೋ ಅಂತಹ ಮತಗಟ್ಟೆಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಮತದಾನ ಮಾಡಲು ಮತದಾರರು ಆಸಕ್ತಿ ವಹಿಸಬೇಕು ಎಂದರು. ಮೈಸೂರು -ಕೊಡಗು ಲೋಕಸಭಾ ಕ್ಷೇತ್ರದಲ್ಲಿ ಚುನಾವಣೆ ಸಂಬಂಧ ಇಂದು ವಿವಿಧ ತಂಡಗಳ ಮುಖ್ಯಸ್ಥರಿಗೆ ನೀತಿ ಸಂಹಿತೆ ಪಾಲನೆ ಬಗ್ಗೆ ತರಬೇತಿ ನೀಡಲಾಯಿತು. ಜಿಲ್ಲೆಯಾದ್ಯಂತ ಚೆಕ್‌ಪೋಸ್ಟ್‌ಗಳಲ್ಲಿ ಕಟ್ಟುನಿಟ್ಟಿನ ಎಚ್ಚರ ವಹಿಸಬೇಕು. ಅನುಮಾನಾಸ್ಪದ ಪ್ರಕರಣಗಳಿದ್ದಲ್ಲಿ ಸತ್ಯಾಸತ್ಯತೆಯನ್ನು ಖಾತರಿಪಡಿಸಿಕೊಳ್ಳಬೇಕುಎ ಎಂದು ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ ಸೂಚಿಸಿದರು. ರಾಮನಗರ ಜಿಲ್ಲೆಯ  ಚೆನ್ನಪಟ್ಟಣ ತಾಲೂಕು ಸ್ವೀಪ್ ಸಮಿತಿ ವತಿಯಿಂದ ತಾಲೂಕಿನ ಸ್ವಸಹಾಯ ಒಕ್ಕೂಟದ ಮಹಿಳೆಯರ ಜಾಥಾ ಇಂದು ನಡೆಯಿತು. ಪ್ರತಿಯೊಬ್ಬರೂ ಕಡ್ಡಾಯವಾಗಿ ಮತದಾನ ಮಾಡಬೇಕು. ಸ್ವಸಹಾಯ ಗುಂಪಿನ ಮಹಿಳೆಯರು, ಮತದಾರರ ಮನವೊಲಿಕೆಗೆ ಹಲವು ಕಾರ್ಯಕ್ರಮ ಹಾಕಿಕೊಳ್ಳಬೇಕು ಎಂದು ತಾಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಮನು.ಪಿ.ಕೆ ತಿಳಿಸಿದರು.

**<><*<><>*><>**

ಕೊಡವ ಕುಟುಂಬಗಳ ನಡುವಣ ಪ್ರತಿಷ್ಠಿತ ಹಾಕಿ ಉತ್ಸವ ಕುಂಡ್ಯೋಳಂಡ ಹಾಕಿ ಹಬ್ಬ ಈ ತಿಂಗಳ ೨೦ ರಿಂದ ಏಪ್ರಿಲ್ ೧೮ರವರೆಗೆ ನಡೆಯಲಿದೆ. ನಾಪೋಕ್ಲು ಗ್ರಾಮದ ಜನರಲ್ ತಿಮ್ಮಯ್ಯ ಕ್ರೀಡಾಂಗಣದಲ್ಲಿ ಈ ವರ್ಷ ದಾಖಲೆಯ ೩೩೦ ತಂಡಗಳು ಹೆಸರು ನೊಂದಾಯಿಸಿಕೊಂಡಿದ್ದು, ಉದ್ಘಾಟನಾ ಪಂದ್ಯದಲ್ಲಿ ಕೂರ್ಗ್ ಇಲೆವೆನ್- ಇಂಡಿಯನ್ ನೇವಿ ತಂಡಗಳು ಮುಖಾಮುಖಿಯಾಗಲಿವೆ. ಈ ವರ್ಷ ೧೪ನೇ ಹಾಕಿ ಹಬ್ಬ ಕೊಡಗಿನ ಕುಂಡ್ಯೋಳಂಡ ಕುಟುಂಬದ ಸಾರಥ್ಯದಲ್ಲಿ ನಡೆಯಲಿದೆ. ಕೊಡವ ಹಾಕಿ ಅಕಾಡೆಮಿ, ಹಾಕಿ ಕೂರ್ಗ್, ಹಾಕಿ ಕರ್ನಾಟಕ ಹಾಗೂ ಸ್ಥಳೀಯ ಗ್ರಾಮಸ್ಥರು ಈ ಹಾಕಿ ಹಬ್ಬಕ್ಕೆ ಸಹಕಾರ ನೀಡಲಿದ್ದಾರೆ. ಅಂದಾಜು ೩೦ ಸಾವಿರ ಕ್ರೀಡಾಭಿಮಾನಿಗಳು ತಮ್ಮ ನೆಚ್ಚಿನ ಕ್ರೀಡೆಯನ್ನು ವೀಕ್ಷಿಸುವ ನಿರೀಕ್ಷೆಯಿದೆ ಎಂದು ಕೊಡವ ಹಾಕಿ ಅಕಾಡೆಮಿ ಅಧ್ಯಕ್ಷ ಪಿ.ಕೆ.ಬೋಪ್ಪಣ್ಣ ಮಡಿಕೇರಿಯಲ್ಲಿಂದು ತಿಳಿಸಿದ್ದಾರೆ. ಭಾರತೀಯ ಹಾಕಿಯ ತೊಟ್ಟಿಲು ಎಂದೇ ಹೆಸರಾದ ಕೊಡಗು ಜಿಲ್ಲೆ, ಕ್ರೀಡಾ ಕ್ಷೇತ್ರದಲ್ಲಿ ಶ್ರೀಮಂತ ಪರಂಪರೆಯನ್ನು ಹೊಂದಿದೆ. ೩೦ಕ್ಕೂ ಹೆಚ್ಚು ಕೊಡವ ಅಂತಾರಾಷ್ಟ್ರೀಯ ಹಾಕಿ ಆಟಗಾರರು ಹಾಕಿ ಕ್ರೀಡೆಯ ಪರಂಪರೆಗೆ ಕೊಡುಗೆ ನೀಡಿದ್ದಾರೆ. ಕೊಡವ ಹಾಕಿ ಉತ್ಸವ ೧೯೯೭ರಲ್ಲಿ ಕರಡ ಗ್ರಾಮದಲ್ಲಿ

ಮೊದಲ ಬಾರಿಗೆ ಆಯೋಜಿಸಲ್ಪಟ್ಟಿತ್ತು. ಆಗ ೬೦ ತಂಡಗಳು ಭಾಗವಹಿಸಿದ್ದವು ಎಂದು ನಮ್ಮ ಕೊಡಗು ಜಿಲ್ಲಾ ಪ್ರತಿನಿಧಿ ವರದಿ ಮಾಡಿದ್ದಾರೆ

<><*<><>*><>

ಇನ್ನು ಸಂಕ್ಷಿಪ್ತಸುದ್ದಿಗಳು

೧. ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ರಸಗೊಬ್ಬರ ಬಿತ್ತನೆ ಬೀಜ, ಕೃಷಿ ಯಂತ್ರೋಪಕರಣಗಳು, ದಿನಬಳಕೆಯ ಅಗತ್ಯವಸ್ತುಗಳು ಸೇರಿದಂತೆ ಯಾವುದೇ ವಸ್ತುಗಳನ್ನು ಖರೀದಿ ಮಾಡಿದಾಗ ಗ್ರಾಹಕರು ತಪ್ಪದೇ, ಅಧಿಕೃತ ರಶೀದಿಯನ್ನು ಪಡೆಯಬೇಕು.ಇದರಿಂದ ಕಳಪೆ ವಸ್ತುಗಳ ಖರೀದಿ ವಂಚನೆಯಿಂದ ಪಾರಾಗಬಹುದು ಮತ್ತು ನಷ್ಟವಾಗಿದ್ದಲ್ಲಿ ಕಾನೂನು ರೀತಿಯಲ್ಲಿ ಪರಿಹಾರವನ್ನು ಪಡೆಯಬಹುದು ಎಂದು ಗುಡಿಬಂಡೆ ಜೆಎಂಎಫ್‌ಸಿ ನ್ಯಾಯಾಲಯದ ನ್ಯಾಯಾಧೀಶರಾದ ಕೆ.ಎಂ.ಹರೀಶ್ ಹೇಳಿದ್ದಾರೆ.

೨. ವಿಜಯಪುರ ಜಿಲ್ಲೆಯಲ್ಲಿ ಪ್ರಸವ ಪೂರ್ವ ಲಿಂಗಪತ್ತೆ ನಿಷೇಧ ಕಾನೂನನ್ನು ಎಲ್ಲ ಸ್ಕ್ಯಾನಿಂಗ್ ಸೆಂಟರ್‌ಗಳು ಕಡ್ಡಾಯವಾಗಿ ಪಾಲಿಸಬೇಕು. ತಪ್ಪಿದಲ್ಲಿ, ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ಟಿ.ಭೂ ಬಾಲನ್ ಎಚ್ಚರಿಕೆ ನೀಡಿದ್ದಾರೆ.

೩. ದಕ್ಷಿಣಕನ್ನಡ ಜಿಲ್ಲೆಯ ಹಲವೆಡೆ ಇಂದು ಬೆಳಿಗ್ಗೆ ಮಳೆಯಾಗಿದ್ದು, ತೀವ್ರ ಧಗೆಯಿಂದ ಕಂಗೆಟ್ಟಿದ್ದ ಜನರಿಗೆ ನಿರಾಳವಾಗಿದೆ. ಕೋಟೆಕಾರ್, ತಲಪಾಡಿ, ಮಲ್ಲೂರು, ಕಿನ್ಯಾದಲ್ಲಿ ಉತ್ತಮ ಮಳೆಯಾಗಿದೆ. ಆದರೂ, ಜಿಲ್ಲೆಯಾದ್ಯಂತ ಧಗೆಯ ವಾತಾವರಣ ಮುಂದುವರೆದಿದೆ.

೪. ವಿಜಯನಗರ ಜಿಲ್ಲೆಯಲ್ಲಿ ಇದೇ ೨೫ ರಿಂದ ಆರಂಭವಾಗಲಿರುವ ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ಒಟ್ಟು ೬೫ ಕೇಂದ್ರಗಳಲ್ಲಿ ೨೧ ಸಾವಿರದ ೭೬೮ ವಿದ್ಯಾರ್ಥಿಗಳು ಹಾಜರಾಗಲಿದ್ದಾರೆ. ಪರೀಕ್ಷಾ ಕೇಂದ್ರಗಳ ಆಸುಪಾಸುನಲ್ಲಿ ಯಾವುದೇ ಅಹಿತಕರ ಘಟನೆಗೆ ಅವಕಾಶವಾಗದಂತೆ ನಿಬಂಧಿತ ಪ್ರದೇಶವೆಂದು ಘೋಷಿಸಲಾಗಿದೆ. ೨೦೦ ಮೀಟರ್ ಆವರಣದಲ್ಲಿ ಜೆರಾಕ್ಸ್ ಮತ್ತು ಕಂಪ್ಯೂಟರ್ ಕೇಂದ್ರಗಳನ್ನು ಬಂದ್ ಮಾಡಿಸಲಾಗಿದೆ ಎಂದು ಜಿಲ್ಲಾಧಿಕಾರಿ ದಿವಾಕರ್.ಎಂ.ಎಸ್ ತಿಳಿಸಿದ್ದಾರೆ.

೫. ಕೊಡಗು ಜಿಲ್ಲೆಯ ಕೂಡಿಗೆಯಲ್ಲಿರುವ ಸೈನಿಕ ಶಾಲೆಗೆ ಇಂದು ಕಾರವಾರ ನೌಕಾನೆಲೆಯ ೧೩ ಅಧಿಕಾರಿಗಳ ತಂಡ ಭೇಟಿ ನೀಡಿತ್ತು. ಸೈನಿಕ ಶಾಲೆಯ ಕೆಡೆಟ್‌ಗಳೊಂದಿಗೆ ಸಂವಾದ ನಡೆಸಿದ ಅಧಿಕಾರಿಗಳು, ಭಾರತೀಯ ನೌಕಾಪಡೆಯಲ್ಲಿ ವೃತ್ತಿ ಜೀವನ ಆಯ್ಕೆಗೆ ಇರುವ ಅವಕಾಶಗಳನ್ನು ತಿಳಿಸಿದರು. ಈ ತಂಡ, ಮಡಿಕೇರಿಯಲ್ಲಿರುವ ಜನರಲ್ ತಿಮ್ಮಯ್ಯ ಮ್ಯೂಸಿಯಮ್‌ಗೂ ಭೇಟಿ ನೀಡಿತು.

೬. ಉತ್ತರಕನ್ನಡ ಜಿಲ್ಲೆಯಲ್ಲಿ ರೈತರು ತಮ್ಮ ಜಾನುವಾರುಗಳಿಗೆ ಕಾಲುಬಾಯಿ ರೋಗದ ವಿರುದ್ಧ ಕಡ್ಡಾಯವಾಗಿ ಲಸಿಕೆ ಹಾಕಿಸಬೇಕು. ಜಿಲ್ಲೆಯಲ್ಲಿ ಏಪ್ರಿಲ್ ೧ರಿಂದ ೩೦ರವರೆಗೆ ಐದನೇ ಸುತ್ತಿನ ಕಾಲುಬಾಯಿ ಜ್ವರದ ಲಸಿಕೆಯನ್ನು ನೀಡಲಾಗುತ್ತದೆ ಎಂದು ಜಿಲ್ಲಾಧಿಕಾರಿ ಗಂಗೂಬಾಯಿ ಮಾನ್‌ಕರ್ ಸೂಚಿಸಿದ್ದಾರೆ.

೭. ಉಡುಪಿ ಜಿಲ್ಲೆಯಲ್ಲಿ ರಾಷ್ಟ್ರೀಯ ಜಾನುವಾರು ರೋಗಗಳ ನಿಯಂತ್ರಣದ ಕಾರ್ಯಕ್ರಮದಡಿ ಐದನೇ ಸುತ್ತಿನ ಕಾಲುಬಾಯಿ ಲಸಿಕೆ ಕಾರ್ಯಕ್ರಮ ಏಪ್ರಿಲ್ ೧ ರಿಂದ ೩೦ರವರೆಗೆ ನಡೆಯಲಿದ್ದು, ರೈತರು ಇದರ ಪ್ರಯೋಜ ಪಡೆಯಬೇಕು. ಲಸಿಕೆ ಕಾರ್ಯ ನಿರ್ವಹಿಸಲು ಪಶುವೈದ್ಯಾಧಿಕಾರಿಗಳು ಹಾಗೂ ಸಿಬ್ಬಂದಿ ಮನೆಗಳಿಗೆ ಭೇಟಿ ನೀಡಿದಾಗ ಸಾರ್ವಜನಿಕರು ಸಹಕರಿಸಬೇಕು ಎಂದು ಜಿಲ್ಲಾಧಿಕಾರಿ ಡಾ.ಕೆ.ವಿದ್ಯಾಕುಮಾರಿ ಮನವಿ ಮಾಡಿದ್ದಾರೆ.

೮. ಚಾಮರಾಜನಗರ ಜಿಲ್ಲೆಯ ಎಲ್ಲ ನ್ಯಾಯಾಲಗಳಲ್ಲಿ ಈ ತಿಂಗಳ ೧೬ರಂದು ಹಮ್ಮಿಕೊಳ್ಳಲಾಗಿದ್ದ ಲೋಕ್ ಅದಾಲತ್‌ನಲ್ಲಿ ೩೧ ಸಾವಿರದ ೨೬೭ ಪ್ರಕರಣಗಳನ್ನು ಇತ್ಯರ್ಥಗೊಳಿಸಲಾಗಿದೆ. ಈ ಪೈಕಿ ಚಾಮರಾಜನಗರದಲ್ಲಿ ೧೯ ಸಾವಿರದ ೮೭೫, ಯಳಂದೂರಿನಲ್ಲಿ ೨ ಸಾವಿರದ ೧೭೮, ಕೊಳ್ಳೇಗಾಲದಲ್ಲಿ ೫ ಸಾವಿರದ ೮೩೯ ಮತ್ತು ಗುಂಡ್ಲುಪೇಟೆಯಲ್ಲಿ ೩ ಸಾವಿರದ ೩೭೫ ಪ್ರಕರಣಗಳನ್ನು ರಾಜಿ ಸಂದಾನದ ಮೂಲಕ ಬಗೆಹರಿಸಲಾಗಿದೆ ಎಂದು ಪ್ರಧಾನ ಜಿಲ್ಲಾ ಸೆಷನ್ಸ್ ನ್ಯಾಯಾಧೀಶರಾದ ಬಿ.ಎಸ್.ಭಾರತಿ ತಿಳಿಸಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**